# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಧಾರವಾಡ ಕೃಷಿ ವಿಶ್ವವಿದ್ಯಾಲಯಕ್ಕೆ 2013-14ನೇ ಸಾಲಿನ 3ನೇ ತ್ರೈಮಾಸಿಕ ಯೋಜನೇತರ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:-**
1. ಸರ್ಕಾರದ ಆದೇಶ ಸಂಖ್ಯೆ: ಕೃಇ 16 ಕೃವಿಧಾ 2013 ದಿನಾಂಕ: 28-05-2013.
2. ಸರ್ಕಾರದ ಆದೇಶ ಸಂಖ್ಯೆ: ಕೃಇ 16 ಕೃವಿಧಾ 2013 ದಿನಾಂಕ: 28-08-2013.
3. ಧಾರವಾಡ ಕೃಷಿ ವಿಶ್ವವಿದ್ಯಾಲಯದ ದಿನಾಂಕ: 08-10-2013ರ ಪತ್ರ ಸಂಖ್ಯೆ: ಹನಿಅ/ಯೋಜನೇತರಅನು/2013-14.

**** *** ****

**ಪ್ರಸ್ತಾವನೆ:-**

ಧಾರವಾಡ ಕೃಷಿ ವಿಶ್ವವಿದ್ಯಾಲಯಕ್ಕೆ ಯೋಜನೇತರ ಉದ್ದೇಶಕ್ಕಾಗಿ ಸರ್ಕಾರವು 2013-14ನೇ ಸಾಲಿನ ಆಯವ್ಯಯದಲ್ಲಿ ಲೆಕ್ಕಶೀರ್ಷಿಕೆ 2415-80-004-2-01 ಸಹಾಯಾನುದಾನ 101 ಅಡಿಯಲ್ಲಿ ರೂ. 5573.00 ಲಕ್ಷಗಳ ಅನುದಾನವನ್ನು ಹಂಚಿಕೆ ಮಾಡಿದ್ದು, ತ್ರೈಮಾಸಿಕ ಕಂತಿನ ರೂಪದಲ್ಲಿ ತಲಾ ರೂ. 1750.00 + 1036.50 ಲಕ್ಷಗಳಂತೆ ಒಟ್ಟು ರೂ. 2786.50 ಲಕ್ಷಗಳನ್ನು ಮೇಲೆ (1) ಮತ್ತು (2)ರಲ್ಲಿ ಓದಲಾದ ದಿನಾಂಕ: 28-05-2013 ಮತ್ತು 28-08-2013ರ ಆದೇಶದಲ್ಲಿ ಬಿಡುಗಡೆ ಮಾಡಲಾಗಿದೆ.

ಮೇಲೆ (3)ರಲ್ಲಿ ಓದಲಾದ ಪತ್ರ ದಿನಾಂಕ: 08-10-2013ರಲ್ಲಿ ಧಾರವಾಡ ಕೃಷಿ ವಿಶ್ವವಿದ್ಯಾಲಯದ ಹಣಕಾಸು ನಿಯಂತ್ರಣಾಧಿಕಾರಿಗಳು ಯೋಜನೇತರ ಅನುದಾನದ 3ನೇ ತ್ರೈಮಾಸಿಕ ಕಂತಿನ ಅನುದಾನದ ಬಾಬ್ತು ಒಟ್ಟು ರೂ. 1393.25 ಲಕ್ಷಗಳನ್ನು ಯೋಜನೇತರ ಉದ್ದೇಶಕ್ಕಾಗಿ ಲೆಕ್ಕಶೀರ್ಷಿಕೆ 2415-80-004-2-01 ಸಹಾಯಾನುದಾನ 101 ಅಡಿಯಲ್ಲಿ ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಕೃಇ 16 ಕೃವಿಧಾ 2013, ಬೆಂಗಳೂರು, ದಿನಾಂಕ: 14-11-2013**

ಪ್ರಸ್ತಾವನೆಯಲ್ಲಿ ವಿವರಿಸಲಾದ ಕಾರಣಗಳ ಹಿನ್ನೆಲೆಯಲ್ಲಿ ಯೋಜನೇತರ ಉದ್ದೇಶಕ್ಕಾಗಿ

...2

ಧಾರವಾಡ ಕೃಷಿ ವಿಶ್ವವಿದ್ಯಾಲಯಕ್ಕೆ 2013-14ನೇ ಸಾಲಿನಲ್ಲಿ ಲೆಕ್ಕಶೀರ್ಷಿಕೆ 2415-80-004-2-01 (ಸಹಾಯಾನುದಾನ-101) ಯೋಜನೇತರ ಅಡಿಯಲ್ಲಿ ಹಂಚಿಕೆ ಮಾಡಲಾದ ರೂ. 5573.00 ಲಕ್ಷಗಳ ಪೈಕಿ 1393.25 ಲಕ್ಷಗಳನ್ನು (ಒಂದು ಸಾವಿರದ ಮೂರು ನೂರ ತೊಂಭತ್ತ ಮೂರು ಲಕ್ಷದ ಇಪ್ಪತ್ತೈದು ಸಾವಿರಗಳು ಮಾತ್ರ) ಮೂರನೇ ತ್ರೈಮಾಸಿಕ ಯೋಜನೇತರ ಅನುದಾನವಾಗಿ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಬಿಡುಗಡೆ ಮಾಡಲಾಗಿದೆ:-

1. ಪ್ರತಿ ತಿಂಗಳ ಅನುದಾನವನ್ನು ಆಯಾ ತಿಂಗಳ 20ನೇ ತಾರೀಖಿನಂದು ಅಥವಾ 20ನೇ ತಾರೀಖಿನ ನಂತರ ಹಿಂದಿನ ತಿಂಗಳ ಬಳಕೆ ಪ್ರಮಾಣ ಪತ್ರವನ್ನು ಒದಗಿಸಿ ಬಿಲ್ಲಿಗೆ ಮೇಲು ರುಜು ಪಡೆಯತಕ್ಕದ್ದು;
2. ಸರ್ಕಾರವು ಯಾವ ಉದ್ದೇಶಕ್ಕಾಗಿ ಅನುದಾನ ಬಿಡುಗಡೆ ಮಾಡುವುದೋ ಅದೇ ಉದ್ದೇಶಕ್ಕಾಗಿ ಅನುದಾನವನ್ನು ಉಪಯೋಗಿಸತಕ್ಕದ್ದು;
3. ಸರ್ಕಾರವು ನೀಡಿದ ಸೂಚನೆ, ಆದೇಶಗಳನುಸಾರ ಕೃಷಿ ವಿಶ್ವವಿದ್ಯಾಲಯದವರು ಯೋಜನೆಯ ವೆಚ್ಚದಲ್ಲಿ ಕಟ್ಟುನಿಟ್ಟಾಗಿ ಮಿತವ್ಯಯವನ್ನು ಪಾಲಿಸತಕ್ಕದ್ದು;
4. ಬಿಡುಗಡೆಯಾಗಿರುವ ಅನುದಾನದ ಬಗ್ಗೆ ಸೂಕ್ತ ಸಮಯದಲ್ಲಿ ಮಹಾಲೇಖಪಾಲರ ಲೆಕ್ಕಗಳೊಂದಿಗೆ ಹೊಂದಾಣಿಕೆ ಮಾಡಿಕೊಳ್ಳತಕ್ಕದ್ದು;
5. ಬಿಡುಗಡೆ ಮಾಡಲಾಗಿರುವ ಅನುದಾನವನ್ನು ಆರ್ಥಿಕ ಪರಿಸ್ಥಿತಿಯನ್ನು ಅನುಸರಿಸಿ ಆರ್ಥಿಕ ಇಲಾಖೆಯು ನೀಡಬಹುದಾದ ಸೂಚನೆಗಳಿಗೆ ಒಳಪಟ್ಟಿರುತ್ತದೆ;
6. ಆಯಾ ತಿಂಗಳಿಗೆ ಪ್ರತ್ಯೇಕ ಬಿಲ್ಲನ್ನು ಒದಗಿಸುವುದು.

2. ಬಿಡುಗಡೆಯಾಗಿರುವ ಅನುದಾನಕ್ಕೆ ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯ, ಧಾರವಾಡ, ಇವರು ಸಲ್ಲಿಸುವ ಬಿಲ್ಲಿಗೆ ಮೇಲು ರುಜು ಮಾಡುವ ಅಧಿಕಾರವನ್ನು Regional Joint Director of Collegiate Education, Dharwad, ಇವರಿಗೆ ನೀಡಲಾಗಿದೆ.

...3

3. ಈ ಆದೇಶವನ್ನು ಆರ್ಥಿಕ ಇಲಾಖೆಯ ದಿನಾಂಕ: 16-05-2013ರ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 2013ರಲ್ಲಿ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾದ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ**

**(ಮಂಜುನಾಥ್ ಪಾಟೀಲ್)**
**ಸರ್ಕಾರದ ಅಧೀನ ಕಾರ್ಯದರ್ಶಿ**
**ಕೃಷಿ ಇಲಾಖೆ (ಸೇವೆಗಳು)**
**(ದೂರವಾಣಿ ಸಂಖ್ಯೆ: 080 2203 2344)**

**<u>ಇವರಿಗೆ</u>:-**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಬೆಂಗಳೂರು – ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ, ಪ್ರಕಟಿತ 15 ಪ್ರತಿಗಳನ್ನು ಒದಗಿಸಲು.

**<u>ಪ್ರತಿ</u>:-**

1. ಮಹಾಲೇಖಪಾಲರು, ಕರ್ನಾಟಕ, (ಲೆಕ್ಕಪತ್ರ/ತನಿಖೆ) ಬೆಂಗಳೂರು.
2. ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಧಾರವಾಡ
3. ಕೃಷಿ ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
4. ಜಿಲ್ಲಾ ಖಜಾನಾಧಿಕಾರಿಗಳು, ಧಾರವಾಡ ಜಿಲ್ಲೆ, ಧಾರವಾಡ.
5. ಉಪ ನಿರ್ದೇಶಕರು, ನೆಟ್‌ವರ್ಕ್ ಮೇನೇಜ್‌ಮೆಂಟ್ ಸೆಂಟರ್, ಖನಿಜ ಭವನ, ಬೆಂಗಳೂರು.
6. ಕುಲಸಚಿವರು/ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯ, ಧಾರವಾಡ.
7. ಕ್ಷೇತ್ರೀಯ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಧಾರವಾಡ.
8. ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4 & 5), ವಿಧಾನ ಸೌಧ, ಬೆಂಗಳೂರು.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.